ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ ನ್ಯಾಯಾಲಯ, ವಿರಾಜಪೇಟೆ

**ಉಪಸ್ಥಿತರುಃ ಸಂತೋಷ ಕೊಠಾರಿ,**
**ಬಿ.ಎ.ಎಲ್., ಎಲ್.ಎಲ್.ಬಿ.,**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ ನ್ಯಾಯಾಲಯ, ವಿರಾಜಪೇಟೆ**

# ಸಿ. ಸಿ. ನಂ.517/2021

ಪಿರ್ಯಾದಿಃ ವ್ಯವಸ್ಥಾಪಕರು, ಕೆಡಿಸಿಸಿ ಬ್ಯಾಂಕ್,ಸಿದ್ದಾಪುರ ಶಾಖೆ,
ಪ್ರತಿನಿಧಿಸುವವರು ಹಾಲಿ ವ್ಯವಸ್ಥಾಪಕರು,
ಶ್ರೀ ಭಾಸ್ಕರ್ ಕೆ.ವಿ, ತಂದೆಃ ವೇಲಾಯುಧ, ಪ್ರಾಯ 53 ವರ್ಷ,
ಸಿದ್ದಾಪುರ, ವಿರಾಜಪೇಟೆ ತಾಲ್ಲೂಕು, ಕೊಡಗು ಜಿಲ್ಲೆ.

(ಶ್ರೀಮತಿ ಸಿ.ಬಿ ಅನಿತಾ, ವಕೀಲರು)

***ವಿರುದ್ಧ***

ಆರೋಪಿಃ ಶ್ರೀ ಎಂ. ಹರೀಶ್, ತಂದೆಃ ಮುರುಗೇಶ್,
ವಾಸಃ ಪಾಲಿಬೆಟ್ಟ ರಸ್ತೆ ,ಸಿದ್ದಾಪುರ ಅಂಚೆ,
ವಿರಾಜಪೇಟೆ ತಾಲ್ಲೂಕು, ಕೊಡಗು ಜಿಲ್ಲೆ.
(ಶ್ರೀ ಎಂ.ಎಸ್ ವೆಂಕಟೇಶ್, ವಕೀಲರು)

**::ದಂಡ ಪ್ರಕ್ರಿಯಾ ಸಂಹಿತೆ ವಿಧಿ 313 (1)(ಬಿ) ರಡಿ ದಾಖಲಿಸಿದ ಆರೋಪಿತರ ಹೇಳಿಕೆ ::**

ಪ್ರಶ್ನೆಃ 1 ಪಿರ್ಯಾದುದಾರರ ಸಾಕ್ಷ್ಯವನ್ನು ತಿಳಿದುಕೊಂಡಿರುವಿರಾ?

ಉತ್ತರಃ

ಪ್ರಶ್ನೆಃ 2 ಪ್ರಾಸಾ 1 ಶ್ರೀ ಭಾಸ್ಕರ್ ಕೆ.ವಿ ರವರು ತಮ್ಮ ಮುಖ್ಯ ವಿಚಾರಣೆಯಲ್ಲಿ, ಆರೋಪಿಯಾದ ಶ್ರೀ ಎಂ. ಹರೀಶ್ ರವರಿಗೆ ಕೆಡಿಸಿಸಿ ಬ್ಯಾಂಕ್ , ಸಿದ್ದಾಪುರ ಶಾಖೆಯಿಂದ ರೂ.1,00,000/- ಮುದ್ರಾ ಸಾಲವನ್ನು ಕೊಟ್ಟಿರುತ್ತೇನೆ ಎಂದು ನುಡಿಯುತ್ತಾರೆ. ಈ ಬಗ್ಗೆ ನೀವೇನು ಹೇಳಬಯಸುವಿರಿ?

ಉತ್ತರಃ

ಪ್ರಶ್ನೆ: 3 ಫ್ರಾಸಾ 1 ರವರು ಮುಂದುವರೆದು, ಸದರಿ ಸಾಲವನ್ನು ಮರುಪಾವತಿ ಮಾಡುವ ಸಲುವಾಗಿ ಆರೋಪಿಯಾದ ನೀವು ಚೆಕ್ ನಂಬರ್ 991377 ರೂ.1,00,854/–ಗಳನ್ನು ನಮೂದಿಸಿ, ದಿನಾಂಕ 30.01.2021 ರಂದು ಸದರಿ ಸಾಲವನ್ನು ತೀರಿಸುವ ಸಲುವಾಗಿ ಕೆನರಾ ಬ್ಯಾಂಕ್, ಸಿದ್ಧಾಪುರ ಶಾಖೆಯ ತಮ್ಮ ಖಾತೆಗೆ ಸಂಬಂಧಿಸಿದ ಚೆಕ್ ನೀಡಿದ್ದು, ಅದನ್ನು ನಗದೀಕರಿಸಿಕೊಂಡು ಸಾಲದ ಹಣವನ್ನು ಮರುಪಾವತಿ ಮಾಡಿಕೊಳ್ಳಬೇಕೆಂದು ಆರೋಪಿ ನನಗೆ ತಿಳಿಸಿರುತ್ತಾರೆ ಎಂದು ನುಡಿದಿರುತ್ತಾರೆ. ಈ ಬಗ್ಗೆ ನೀವೇನು ಹೇಳಬಯಸುವಿರಿ?

ಉತ್ತರ:

ಪ್ರಶ್ನೆ: 4 ಫ್ರಾಸಾ 1 ರವರು ಮುಂದುವರೆದು, ನಿಮ್ಮ ಕೋರಿಕೆಯ ಮೇರೆಗೆ ಸದರಿ ಚೆಕ್‌ನ್ನು ಕೆಡಿಸಿಸಿ ಬ್ಯಾಂಕ್, ಮುಖಾಂತರ ನಗದೀಕರಿಸಲು ಸಲ್ಲಿಸಿದರೆ ಆದರೆ ಆರೋಪಿಯ ಬ್ಯಾಂಕ್ ನವರು "Funds Insufficient and drawers signature differs" ಎಂಬ ಕಾರಣ ನೀಡಿ ಚೆಕ್‌ನ್ನು ಅಮಾನ್ಯಗೊಳಿಸಿ ದಿನಾಂಕ: 03.02.2021 ರ ಮೆಮೋದೊಂದಿಗೆ ಹಿಂತಿರುಗಿಸಿರುತ್ತಾರೆ ಎಂದು ನುಡಿದಿರುತ್ತಾರೆ. ಈ ಬಗ್ಗೆ ನೀವೇನು ಹೇಳಬಯಸುವಿರಿ?

ಉತ್ತರ:

ಪ್ರಶ್ನೆ: 5 ಫ್ರಾಸಾ 1 ರವರು ಮುಂದುವರೆದು, ಚೆಕ್ ಅಮಾನ್ಯಗೊಂಡು ಮರಳಿ ಬಂದ ಬಳಿಕ ದಿನಾಂಕ: 15.02.2021 ರಂದು ಆರೋಪಿಗೆ ತನ್ನ ವಕೀಲರ ಮೂಲಕ ನೋಂದಾಯಿತ ಅಂಚೆಯಲ್ಲಿ ನೋಟೀಸ್ ಕಳುಹಿಸಿ ಚೆಕ್‌ನಲ್ಲಿನ ಹಣವನ್ನು ಪಾವತಿ ಮಾಡಬೇಕೆಂದು ತಗಾದೆ ಮಾಡಿರುತ್ತೇನೆ ಆದರೂ ಸಹಾ ಆರೋಪಿಯು ಚೆಕ್‌ನ ಬಾಬ್ತು ಹಣವನ್ನು ಪಾವತಿಸಿರುವುದಿಲ್ಲ ಎಂದು ನುಡಿದಿರುತ್ತಾರೆ. ಈ ಬಗ್ಗೆ ನೀವೇನು ಹೇಳಬಯಸುವಿರಿ?

ಉತ್ತರ:

ಪ್ರಶ್ನೆ: 6 ಫ್ರಾಸಾ 1 ರವರು ಮುಂದುವರೆದು, ಆರೋಪಿ ನನಗೆ ವಂಚನೆ ಮಾಡುವ ಉದ್ದೇಶದಿಂದ, ತಮ್ಮ ಖಾತೆಯಲ್ಲಿ ಸಾಕಷ್ಟು ಹಣ ಇಲ್ಲದೇ ಇದ್ದರೂ ಚೆಕ್‌ನ್ನು ನೀಡಿರುತ್ತಾರೆ ಮತ್ತು ಚೆಕ್ ಹಣವನ್ನು ಪಾವತಿಸಿರುವುದಿಲ್ಲ ಎಂದು ತಿಳಿಸಿ ನಿಪಿ–1 ರಿಂದ ನಿಪಿ–6 ನ್ನು ಗುರುತಿಸಿಕೊಂಡಿದ್ದಾರೆ. ಈ ಬಗ್ಗೆ ನೀವೇನು ಹೇಳಬಯಸುವಿರಿ?

ಉತ್ತರಃ

ಪ್ರಶ್ನೆ: 7 ಮೇಲೆ ಓದಿ ಹೇಳಲಾದ ಪ್ರಶ್ನೆಗಳು ನಿಮಗೆ ಅರ್ಥವಾಯಿತೆ?

ಉತ್ತರಃ

ಪ್ರಶ್ನೆ: 8 ಈ ಮೊಕದ್ದಮೆ ಬಗ್ಗೆ ನೀವೇನಾದರೂ ಹೇಳುವುದು ಇದೆಯೇ?

ಉತ್ತರಃ

ಪ್ರಶ್ನೆ: 9 ನಿಮ್ಮ ಪರವಾಗಿ ಅಭಿರಕ್ಷಣಾ ಸಾಕ್ಷ್ಯ ಇದೆಯೇ? ಇದ್ದರೆ ಮಂಡಿಸಿ.

ಉತ್ತರಃ

(ಮೇಲಿನ ಎಲ್ಲಾ ಪ್ರಶ್ನೆಗಳನ್ನು ಆರೋಪಿಗೆ ಓದಿ, ತಿಳಿ ಹೇಳಿದ ನಂತರ ಆರೋಪಿ ಅದನ್ನು ಅರ್ಥೈಸಿಕೊಂಡು ನಂತರ ನೀಡಿದ ಉತ್ತರಗಳನ್ನು ನಾನೇ ಸ್ವತಃ ದಾಖಲು ಮಾಡಿದ್ದೇನೆ. ಸದರಿ ದಾಖಲೆಯು ಸರಿಯಾದುದು ಮತ್ತು ನಿಜವಾದುದು ಎಂದು ದೃಡೀಕರಿಸುತ್ತೇನೆ.)

ಸಹಿಃ

(ಸಂತೋಷ ಕೊಠಾರಿ )

ದಿನಾಂಕಃ 28.02.2025.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ

ವಿರಾಜಪೇಟೆ.